**ದಿನಾಂಕಃ 03.01.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಪಾಟೀ ಸವಾಲುಃ ಪ್ರತಿ**ವಾದಿ ಪರ** ಶ್ರೀ ಬಿ.ಎಂ.ಎನ್ **ವಕೀಲರಿಂದಃ**

ಈ ದಾವೆಯ ವಾದಿ ಮತ್ತು ನಾನು ಒಂದೇ ಜನಾಂಗಕ್ಕೆ ಸೇರಿದವರಲ್ಲ. ಈ ದಾವೆಯ ವಾದಿಯು ಒಟ್ಟು 6 ಜನರ ವಿರುದ್ಧ 27 ಗುಂಟೆ ಜಮೀನಿಗೆ ಈ ದಾವೆ ಸಲ್ಲಿಸಿರುತ್ತಾರೆ. ಸದರಿ 27 ಗುಂಟೆ ಜಮೀನಿಗೆ ಚೆಕ್ಕುಬಂಧಿ ನನಗೆ ಗೊತ್ತಿಲ್ಲ. ದಾವಾ ಅನುಸೂಚಿ ಸ್ವತ್ತು ವಾದಿಗೆ ಅವರ ತಂದೆಯಿಂದ ವಿಭಾಗದ ಮೂಲಕ ಬಂದಿರುತ್ತದೆ. ಸದರಿ ವಿಭಾಗ ಪತ್ರವನ್ನು ನಾನು ನೋಡಿರುವುದಿಲ್ಲ. ದಾವಾ ಅನುಸೂಚಿ ಸ್ವತ್ತಿನ ಪಹಣಿ ಪತ್ರಿಕೆಯನ್ನು ನಾನು ನೋಡಿರುವುದಿಲ್ಲ.

ಹುನುಗನಹಳ್ಳಿ ಗ್ರಾಮದ ಸರ್ವೆ ನಂ. 8 ರ ಒಟ್ಟು ವಿಸ್ತೀರ್ಣ ಎಷ್ಟು ಎಂದು ನನಗೆ ಗೊತ್ತಿಲ್ಲ. ಈ ದಾವೆಯ 1 ನೇ ಪ್ರತಿವಾದಿಯು ನನಗೆ ಸುಮಾರು 10-12 ವರ್ಷಗಳಿಂದ ಪರಿಚಿತರು. ಪೂರ್ವಕ್ಕೆ-ನಾಲೆ, ಪಶ್ಚಿಮಕ್ಕೆ-ಉಳಿಕೆ ಜಮೀನು, ಉತ್ತರಕ್ಕೆ- ರಸ್ತೆ, ದಕ್ಷಿಣಕ್ಕೆ-ಯಾಲಕ್ಕಿಗೌಡರವರ ಜಮೀನು ಈ ಚೆಕ್ಕುಬಂಧಿಯ ಒಳಗೆ 1 ನೇ ಪ್ರತಿವಾದಿಯು ಮಂಗಳೂರು ಹೆಂಚಿನ ಮನೆಯನ್ನು ಕಟ್ಟಿಕೊಂಡು ವಾಸಿಸುತ್ತಿದ್ದಾರೆ ಎಂದರೆ ಸರಿ. 1 ನೇ ಪ್ರತಿವಾದಿಯು ಸದರಿ ಮನೆಯನ್ನು ಸುಮಾರು 35 ವರ್ಷಗಳ ಹಿಂದೆ ಕಟ್ಟಿಕೊಂಡು ಅಲ್ಲಿಂದ ಇಲ್ಲಿಯವರೆಗೂ ವಾಸಿಸುತ್ತಿದ್ದಾರೆ ಎಂದರೆ ಸರಿ. ನನಗೆ ಈಗ ಸುಮಾರು 54 ವರ್ಷ ವಯಸ್ಸಾಗಿರುತ್ತದೆ. ನಾನು ವಿಧ್ಯಾಭ್ಯಾಸ ಮಾಡಿರುವುದಿಲ್ಲ. ವಾದಿಯು 4 ಗುಂಟೆ ಜಮೀನನ್ನು 1 ನೇ ಪ್ರತಿವಾದಿಗೆ ದಿನಾಂಕ 15.08.1990 ರ ನೊಂದಾಯಿತವಲ್ಲದ ಕ್ರಯಪತ್ರದ ಮೂಲಕ ಮಾರಾಟ ಮಾಡಿದ್ದಾರೆ ಎಂದರೆ ನನಗೆ ಗೊತ್ತಿಲ್ಲ.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ